ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ರಸ್ತೆ ಮತ್ತು ಸೇತುವೆ ಅಪೆಂಡಿಕ್ಸ್-ಇ ಭಾಗ-2ರ ಕಾಮಗಾರಿಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

571 (845) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2018-19ನೇ ಸಾಲಿನಲ್ಲಿ ಅಪೆಂಡಿಕ್ಸ್-ಇ ಭಾಗ-2 ರಲ್ಲಿ ಮೈತ್ರಿ ಸರ್ಕಾರದ ಅವಧಿಯಲ್ಲಿ ರೂ. 5,690.20 ಕೋಟಿ ಅಂದಾಜು ಮೊತ್ತದ ಕಾಮಗಾರಿಗಳನ್ನು ಪಕ್ಷ ಬೇಧವಿಲ್ಲದೇ, ಎಲ್ಲಾ ವಿಧಾನ ಸಭಾ ಕ್ಷೇತ್ರಗಳಿಗೆ ವಿಂಗಡಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಪೈಕಿ ಎಷ್ಟು ಮೊತ್ತದ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗಿದೆ ; (ಕಾಮಗಾರಿಗಳ ಸಂಖ್ಯೆ ಹಾಗೂ ಅಂದಾಜು ಮೊತ್ತದ ವಿವರಗಳನ್ನು ವಿಧಾನಸಭಾ ಕ್ಷೇತ್ರವಾರು ನೀಡುವುದು)

(ಇ) ಕೆಲವೊಂದು ವಿಧಾನಸಭಾ ಕ್ಷೇತ್ರಗಳ ಕಾಮಗಾರಿಗಳನ್ನು ಆರ್ಥಿಕ ಇಲಾಖೆಯು ನೀಡಿರುವ ಟಿಪ್ಪಣಿ ಮೇರೆಗೆ ತಡೆ ಹಿಡಿದಿರುವುದು ನಿಜವೇ ; (ಕಾಮಗಾರಿಗಳ ಸಂಖ್ಯೆ ಹಾಗೂ ಅಂದಾಜು ಮೊತ್ತದ ವಿವರಗಳನ್ನು ವಿಧಾನಸಭಾ ಕ್ಷೇತ್ರವಾರು ನೀಡುವುದು)

(ಈ) ವಿಧಾನ ಮಂಡಲದ ಉಭಯ ಸದನಗಳಿಂದ ಅನುಮೋದನೆ ಪಡೆದ ಈ ಕಾಮಗಾರಿಗಳನ್ನು ಆರ್ಥಿಕ ಇಲಾಖೆಯು ತಡೆ ಹಿಡಿಯಲು ಕಾರಣಗಳೇನು ;

(ಉ) ಈ ಕಾಮಗಾರಿಗಳನ್ನು ತಡೆ ಹಿಡಿದ ನಂತರ, ಆರ್ಥಿಕ ಇಲಾಖೆಯು ಪ್ರಸ್ತುತ ಸಾಲಿನಲ್ಲಿ ಕೆಲವೊಂದು ವಿಧಾನಸಭಾ ಸದಸ್ಯರ ಕ್ಷೇತ್ರಗಳಿಗೆ ಅನುದಾನ ನೀಡಿರುವುದು ನಿಜವೇ ? (ಮಂಜೂರು ನೀಡಲಾದ ಕಾಮಗಾರಿಗಳ ಸಂಖ್ಯೆ ಹಾಗೂ ಅಂದಾಜು ಮೊತ್ತದ ವಿವರಗಳನ್ನು ವಿಧಾನಸಭಾ ಕ್ಷೇತ್ರವಾರು ನೀಡುವುದು)